# ಪರಿಷತ್ ನಿರಾಶ್ರಿತರ ಆಶ್ರಯ ಕೇಂದ್ರ: ಹೊರಟ್ಟಿ ಬೇಸರ

**ಬೆಂಗಳೂರು:** ವಿಧಾನಪರಿಷತ್ ಸದಸ್ಯರಾಗಿ ಅವಧಿ ಪೂರ್ಣೈಸಿ ನಿವೃತ್ತರಾಗಿರುವ ಶಾಸಕರಿಗೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಬುಧವಾರ ಕರ್ನಾಟಕ ವಿಧಾನಪರಿಷತ್ ವತಿಯಿಂದ ಸನ್ಮಾನಿಸಿ ಬೀಳ್ಕೊಡುಗೆ ಸಮಾರಂಭ ಏರ್ಪಡಿಸಲಾಗಿತ್ತು. ಸನ್ಮಾನ ನೆರವೇರಿಸಿ ಮಾತನಾಡಿದ ಸಭಾಪತಿ ಹೊರಟ್ಟಿ ಅವರು, ರಾಜ್ಯದಲ್ಲಿನ ರಾಜಕೀಯ ಪಕ್ಷಗಳು ರಾಜಕೀಯ ಪುಡಾರಿಗಳು ಯಾರು ಇರುತ್ತಾರೋ ಅವರನ್ನ ತಂದು ವಿಧಾನ ಪರಿಷತ್‌ಗೆ ಹಾಕುತ್ತಿದ್ದಾರೆ. ಇದರಿಂದಾಗಿ ಕಲಾಪಗಳು ಸರಿಯಾಗಿ ನಡೆಯದೇ ನಿರಾಶ್ರಿತರ ಆಶ್ರಯ ಕೇಂದ್ರಗಳಂತಾಗಿದೆ ಎಂದು ಅಸಮಾಧಾನ ಹೊರ ಹಾಕಿದ್ದಾರೆ. ರಾಜಕೀಯಕ್ಕೆ ನನ್ನನ್ನ ಯಾರು ಕರೆತಂದಿಲ್ಲ. ನಾನೇ ಸ್ವಂತ ಶಕ್ತಿಯಿಂದ ಬಂದಿದ್ದೇನೆ. ಕಲಾಪದಲ್ಲಿ ಭಾಗಿಯಾದ ಎಲ್ಲಾ ಶಾಸಕರ ಬಗ್ಗೆ ನನಗೆ ಮಾಹಿತಿ ಗೊತ್ತಿದೆ. ಯಾರು ಏನು ಚರ್ಚೆ ಮಾಡಿದ್ದಾರೆ ನನಗೆ ಗೊತ್ತಿದೆ. ನಾನು ಪರಿಷತ್‌ಗೆ ಬಂದಾಗ ಬೆಳಗ್ಗೆ 9.30ಕ್ಕೆ ಕಲಾಪ ಶುರುವಾಗಿ, ರಾತ್ರಿ 8 ಗಂಟೆಗೆ ಮುಗಿಯುತ್ತಿತ್ತು. ಸದನ ನಡೆಯುತ್ತಿದ್ದ ಸಂದರ್ಭದಲ್ಲಿ ಒಂದು ಸೂಜಿ ಬಿದ್ದರೂ ಅದರ ಶಬ್ದ ಕೇಳಿಸುವಷ್ಟು ನಿಶ್ಯಬ್ದ ಇರುತ್ತಿತ್ತು ಎಂದು ಹಿಂದಿನ ನೆನಪು ಮೆಲುಕು ಹಾಕಿದರು.

## ಪರಿಷತ್ ಗೌರವ ಕುಸಿಯುತ್ತಿದೆ

ಇದೀಗ ವಿಧಾನ ಪರಿಷತ್ ಅಂದರೆ ಮುನಿಸಿಪಾಲಿಟಿ ತರಹ ಆಗಿದೆ. ನನಗೆ ಇದರ ಬಗ್ಗೆ ಸಾಕಷ್ಟು ನೋವಾಗಿದೆ. ವಿಧಾನ ಪರಿಷತ್ ಗೌರವ ಕಡಿಮೆ ಆಗುತ್ತಿದೆ. ಕಲಾಪಗಳು ಸರಿಯಾಗಿ ನಡೆಯುತ್ತಿಲ್ಲ. ಎಲ್ಲದಕ್ಕೂ ಬಾವಿಗೆ ಬಂದು ಇಳಿಯೋದು, ಧಿಕ್ಕಾರ ಕೂಗೋದು ಜಾಸ್ತಿ ಆಗಿದೆ. ನಾವೆಲ್ಲ ಅಜೆಂಡಾ ಇಟ್ಟುಕೊಂಡು ಓದಿಕೊಂಡು ಬರುತ್ತಿದ್ದೆವು ಈಗ ಪ್ರಶ್ನೆ ಕೇಳಿ ಎರಡು ನಿಮಿಷಕ್ಕೆ ಹೊರಗೆ ಹೋಗುತ್ತಾರೆ. ಗ್ರಾಮ ಪಂಚಾಯಿತಿ ಕುರಿತ ಒಂದು ಪ್ರಶ್ನೆಗೆ 92 ಸಾವಿರ ಹಣ ವೆಚ್ಚವಾಗಿತ್ತೆಂದು ಹೊರಟ್ಟಿ ವಿವರಿಸಿದರು.

## ಮೇಲ್ಮನೆ ನಿವೃತ್ತ ಸದಸ್ಯರಿಗೆ ಬೀಳ್ಕೊಡುಗೆ

### ಶಿಕ್ಷಕರಿಂದಲೂ ಹಣಕ್ಕೆ ಮತ

ನಮ್ಮ ದೇಶದಲ್ಲಿ ದುಡ್ಡು ಕೊಟ್ಟು ಓಟು ಹಾಕಿಸಿಕೊಳ್ಳೋರು, ದುಡ್ಡು ಪಡೆದು ಓಟು ಹಾಕೋರು ಎಲ್ಲಿವರೆಗೂ ಇರುತ್ತಾರೋ ಅಲ್ಲಿವರೆಗೂ ಪ್ರಜಾಪ್ರಭುತ್ವ ಸರಿ ಆಗಲ್ಲ. ಇದೆಲ್ಲವನ್ನೂ ಕಾಲವೇ ಸುಧಾರಣೆ ಮಾಡಬೇಕು. ನಾನು 8 ಬಾರಿ ಆಯ್ಕೆಯಾಗಿ ಬಂದಿದ್ದೇನೆ. ಅದರ ಗುಟ್ಟು ಸುಖಕರ ಆಗಿಲ್ಲ. ಆದರೆ, ಈಗಿನವರು ಶಿಕ್ಷಕರ ಮತದಾರ ಕ್ಷೇತ್ರದಿಂದಲೂ ದುಡ್ಡು ದುಡ್ಡು ಕೊಟ್ಟು ಓಟ್ ಹಾಕಿಸಿಕೊಂಡು ಬಂದಿದ್ದಾರೆ. ಶಿಕ್ಷಕರು ಸಹ ದುಡ್ಡು ತೆಗೆದುಕೊಂಡು ಮತ ಹಾಕುತ್ತಿದ್ದಾರೆ. ಶಿಕ್ಷಕರು ಸಹ ಚುನಾವಣೆ ದುಡ್ಡಿನ ಮೇಲೆ ಮಾಡಿದರೆ, ರಾಜಕೀಯ ಎಲ್ಲಿಗೆ ಬರುತ್ತಿದೆ ಎಂದು ಆತಂಕವಾಗುತ್ತಿದೆ ಎಂದು ಆಕ್ರೋಶ ಹೊರಹಾಕಿದರು.

ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆಡಳಿತಪಕ್ಷದ ಮುಖ್ಯ ಸಚೇತಕರಾದ ಎಂ.ಎ.ಸಲೀಂ ಅಹ್ಮದ್ ಅವರುಗಳು ನಿರ್ಗಮಿತ ಸದಸ್ಯರಾದ ಯು.ಬಿ.ವೆಂಕಟೇಶ್, ಪ್ರಕಾಶ್ ಕೆ ರಾಥೋಡ್, ಆಯನೂರು ಮಂಜುನಾಥ್, ಅ.ದೇವೇಗೌಡ, ರುದ್ರೇಗೌಡ ಅವರಿಗೆ ಶಾಲುಹೊದಿಸಿ ಸನ್ಮಾನಿಸಿದರು. ಪರಿಷತ್‌ನಿಂದ ಸದಸ್ಯರಾಗಿದ್ದ ಮರಿತಿಬ್ಬೇಗೌಡ, ತೇಜಸ್ವಿನಿಗೌಡ, ಕೆ.ಪಿ.ನಂಜುಂಡಿ, ರಘುನಾಥರಾವ್ ಮಲ್ಕಾಪುರೆ, ಅರವಿಂದ ಕುಮಾರ್ ಅರಳಿ, ಬಿ.ಎಂ.ಫಾರೂಖ್, ಕೆ.ಹರೀಶ್ ಕುಮಾರ್,ಪಿ.ಪಿ.ಮುನಿರಾಜುಗೌಡ, ವೈ.ಎ.ನಾರಾಯಣಸ್ವಾಮಿ, ಅ.ದೇವೇಗೌಡ, ಎಸ್.ರುದ್ರೇಗೌಡ, ಯು.ಬಿ.ವೆಂಕಟೇಶ್ ಹಾಗೂ ಪ್ರಕಾಶ್ ಕೆ ರಾಥೋಡ್ ನಿವೃತ್ತರಾಗಿದ್ದಾರೆ.



ಮೇಲ್ಮನೆ ಸದಸ್ಯರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಯು.ಬಿ.ವೆಂಕಟೇಶ್ ಸೇರಿದಂತೆ ಇತರ ಸದಸ್ಯರನ್ನು ಸಭಾಪತಿ ಬಸವರಾಜ ಹೊರಟ್ಟಿ, ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್ ಸನ್ಮಾನಿಸಿದರು. ಈ ವೇಳೆ ಪರಿಷತ್ ಕಾರ್ಯದರ್ಶಿ ಮಹಾಲಕ್ಷ್ಮೀ ಹಾಜರಿದ್ದರು.

# ರಾಜ್ಯದ ಸರ್ಕಾರಿ ಶಾಲೆ ವಿದ್ಯಾರ್ಥಿಗಳಿಗೆ ಸಮವಸ್ತ್ರ

**ಬೆಂಗಳೂರು:** ರಾಜ್ಯದ ಎಲ್ಲ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ 2 ಜೊತೆ ಸಮವಸ್ತ್ರ ವಿತರಣೆ ಮಾಡಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಆಯುಕ್ತರು ತಿಳಿಸಿದ್ದಾರೆ.

ರಾಜ್ಯದಲ್ಲಿರುವ 1ರಿಂದ 10ನೇ ತರಗತಿವರೆಗಿನ ಎಲ್ಲ ಸರ್ಕಾರಿ ಶಾಲೆ ಮಕ್ಕಳಿಗೆ 2 ಜೊತೆ ಸಮವಸ್ತ್ರ ವಿತರಣೆಯಾಗಿದೆ. ಸಮವಸ್ತ್ರ ಕುರಿತು ಇದೂವರೆಗೆ ವಿದ್ಯಾರ್ಥಿಗಳು ಹಾಗೂ ಪಾಲಕರಿಂದ ಯಾವುದೇ ದೂರುಗಳು ಬಂದಿಲ್ಲ ಎಂದು ಶಾಲಾ ಶಿಕ್ಷಣ ಇಲಾಖೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಾಲೆಗಳು ಆರಂಭವಾಗಿ ಹಲವು ತಿಂಗಳು ಕಳೆದರೂ ಕೆಲವು ಕಡೆ ಸಮವಸ್ತ್ರ ವಿತರಣೆಯಾಗಿರಲಿಲ್ಲ. ಸರ್ಕಾರದ ವಿರುದ್ಧ ವ್ಯಾಪಕ ಟೀಕೆ ವ್ಯಕ್ತವಾಗಿತ್ತು. ಸರ್ಕಾರ ಈಗ ಎಲ್ಲ ಶಾಲೆಗಳ ವಿದ್ಯಾರ್ಥಿಗಳಿಗೆ ಸಮವಸ್ತ್ರ ವಿತರಣೆ ಮಾಡಿದೆ.

# ವಿಜಯೇಂದ್ರ ವಿರುದ್ಧ ಎಫ್‌ಐಆರ್ ರದ್ದು

**ಬೆಂಗಳೂರು:** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ಹಾಗೂ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿದ್ದ ಕ್ರಿಮಿನಲ್ ಪ್ರಕರಣವನ್ನು ಹೈಕೋರ್ಟ್ ರದ್ದುಗೊಳಿಸಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ದ್ವೇಷದ ಅಂಗಡಿ ಕರ್ನಾಟಕವನ್ನು ಮತಾಂಧರ ಗಲಭೆಯ ತೋಟವನ್ನಾಗಿ ಮಾಡಿದೆ ಎಂಬುದಾಗಿ ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪ್ರಕಟಿಸಿದ್ದ ಆರೋಪದ ಮೇಲೆ ಬಿವೈ ವಿಜಯೇಂದ್ರ ವಿರುದ್ಧ ದೂರು ದಾಖಲಾಗಿತ್ತು. ವಿಚಾರಣಾ ನ್ಯಾಯಾಲಯದ ನ್ಯಾಯಿಕ ಪ್ರಕ್ರಿಯೆ ರದ್ದುಗೊಳಿಸುವಂತೆ ಕೋರಿ ಬಿ.ವೈ.ವಿಜಯೇಂದ್ರ ಹಾಗೂ ಬಿಜೆಪಿ ಘಟಕದ ಎಕ್ಸ್ ಖಾತೆ ನಿರ್ವಹಣೆದಾರ ಪ್ರಶಾಂತ ಮಾಕನೂರು ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ.

ವಿಚಾರಣೆ ವೇಳೆ ಅರ್ಜಿದಾರರ ಪರ ಹಾಜರಾಗಿದ್ದ ಹಿರಿಯ ವಕೀಲ ಎಂ.ಅರುಣ್ ಶ್ಯಾಮ್, ಈ ಪ್ರಕರಣ ರಾಜಕೀಯ ದುರುದ್ದೇಶದಿಂದ ಕೂಡಿದೆ. ಅರ್ಜಿದಾರರಿಗೆ ಕಿರುಕುಳ ನೀಡುವ ಉದ್ದೇಶದ ಅಮೂರ್ತ ಸ್ವರೂಪದ ದೂರಾಗಿದೆ. ಅಲ್ಲದೇ, ಅಭಿವ್ಯಕ್ತಿ ಸ್ವಾತಂತ್ರ್ಯದ ಮೇಲಿನ ಉಲ್ಲಂಘನೆಯೂ ಆಗಿದ್ದು, ಜಾವೇದ್ ಅಹಮದ್ ಹಾಜಂ ಮತ್ತು ಮಹಾರಾಷ್ಟ್ರ ಸರ್ಕಾರದ ವಿರುದ್ಧದ ಪ್ರಕರಣದಲ್ಲಿ ಪ್ರತಿಯೊಬ್ಬ ವ್ಯಕ್ತಿಯೂ ಪರಸ್ಪರ ಭಿನ್ನಾಭಿಪ್ರಾಯವನ್ನು ಅಭಿವ್ಯಕ್ತಿ ಸ್ವಾತಂತ್ರ್ಯ ಗೌರವಿಸಬೇಕು ಎಂಬ ಸುಪ್ರೀಂಕೋರ್ಟ್ ತೀರ್ಪನ್ನು ಪರಿಗಣಿಸಿ ಈ ಪ್ರಕರಣವನ್ನು ರದ್ದುಗೊಳಿಸಬೇಕು ಎಂದು ಕೋರಿದರು.

# ಸ್ವಾತಂತ್ರ್ಯ ಭಾರತದ ಮೈಲಿಗಲ್ಲು ಸಂವಿಧಾನ: ಹೊರಟ್ಟಿ

## ವಿಶ್ವಗುರು ಬುದ್ಧ ಪ್ರೊಡಕ್ಷನ್ಸ್ ನಿಂದ ಸಂವಿಧಾನದ ಅಮೃತ ಮಹೋತ್ಸವ | ಸಂವಿಧಾನ ಗೀತೆ ಬಿಡುಗಡೆ

■ **ಉದಯವಾಣಿ ಸಮಾಚಾರ**

**ಬೆಂಗಳೂರು:** ಜಗತ್ತಿನಲ್ಲೇ ಶ್ರೇಷ್ಠ ಸಂವಿಧಾನವಾಗಿರುವ ನಮ್ಮ ಸಂವಿಧಾನವನ್ನು ಎಲ್ಲರೂ ಗೌರವಿಸಬೇಕು ಎಂದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಸರ್ಕಾರದ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ವಿಶ್ವಗುರು ಬುದ್ಧ ಪ್ರೊಡಕ್ಷನ್ಸ್ ಸಂಸ್ಥೆಯವರು ಶಾಸಕರ ಭವನದಲ್ಲಿ ಆಯೋಜಿಸಿದ್ದ ಸಂವಿಧಾನಕ್ಕೆ 75ನೇ ವರ್ಷ – ಅಮೃತ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಡಾ. ಬಿ.ಆರ್. ಅಂಬೇಡ್ಕರ್ ಭಾರತದಲ್ಲಿ ಹುಟ್ಟದಿದ್ದರೆ, ನಮ್ಮ ಸಂವಿಧಾನದಲ್ಲಿರುವ ಪರಿಕಲ್ಪನೆಯೇ ಇರುತ್ತಿರಲಿಲ್ಲ. ಅವರು ನೀಡಿರುವ ಸಂವಿಧಾನ ಸ್ವಾತಂತ್ರ್ಯ ಭಾರತದ ಮೈಲಿಗಲ್ಲು. ಅವರನ್ನು ಒಂದು ಜಾತಿಗೆ ಸೀಮಿತಗೊಳಿಸಿ ನೋಡುವ ದೃಷ್ಟಿಕೋನ ಬದಲಾಗಬೇಕು ಎಂದು ಅವರು ಹೇಳಿದರು. ಕಾರ್ಯಕ್ರಮದಲ್ಲಿ ವಿಶ್ವಗುರು ಬುದ್ಧ ಪ್ರೊಡಕ್ಷನ್ಸ್ ಸಂಸ್ಥೆಯಿಂದ ನಿರ್ಮಿಸಿರುವ 'ಮನೆ ಮನಕ್ಕೆ ಸಂವಿಧಾನ' ಡಾಕ್ಯೂ ಡ್ರಾಮಾ ಸಾಕ್ಷ್ಯಚಿತ್ರವನ್ನು ಹೊರಟ್ಟಿ ಅವರು ಬಿಡುಗಡೆಗೊಳಿಸಿದರು. ಅಲ್ಲದೆ ವಿಶ್ವಗುರು ಬುದ್ಧ ಪ್ರೊಡಕ್ಷನ್ಸ್ ಪ್ರಸ್ತುತಿಯ



**ಶಾಸಕರ ಭವನದಲ್ಲಿ ಆಯೋಜಿಸಿದ್ದ ಸಂವಿಧಾನಕ್ಕೆ 75ನೇ ವರ್ಷ–ಅಮೃತ ಮಹೋತ್ಸವವನ್ನು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.**

ಸಂವಿಧಾನ ಗೀತೆ ಬಿಡುಗಡೆಗೊಳಿಸಲಾಯಿತು.

ವಿಧಾನ ಪರಿಷತ್ ಸದಸ್ಯ ಎಸ್. ವಿ. ಸಂಕನೂರ, ವಿಧಾನಸಭೆ ಮುಖ್ಯ ಸಚೇತಕ ಅಶೋಕ್ ಪಟ್ಟಣ, ಮಾಜಿ ಸಚಿವ ಮಾಲೀಕಯ್ಯ ಗುತ್ತೇದಾರ್, ವಿಧಾನ ಪರಿಷತ್ತು ಸಚಿವಾಲಯದ ಕಾರ್ಯದರ್ಶಿ ಕೆ.ಆರ್. ಮಹಾಲಕ್ಷ್ಮೀ, ವಿಧಾನ ಪರಿಷತ್ತು ಸಚಿವಾಲಯದ ಕಾರ್ಯದರ್ಶಿ ಎಸ್. ನಿರ್ಮಲಾ, ವಿಧಾನಸಭೆ ಸಚಿವಾಲಯದ ಉಪಕಾರ್ಯದರ್ಶಿ ಮೊಹಮ್ಮದ್ ಗೌಸ್ ಕೆ., ವಿಧಾನ ಪರಿಷತ್ತು ಸಚಿವಾಲಯದ ಅಧೀನ ಕಾರ್ಯದರ್ಶಿ ಮೀನಾ ನಾಯಕ್, ವಿಧಾನಸೌಧ ಭದ್ರತಾ ವಿಭಾಗದ ಉಪ ಪೊಲೀಸ್ ಆಯುಕ್ತ ಎಂ.ಎನ್. ಕರಿಬಸವನಗೌಡ ಇತರರಿದ್ದರು. ವಿಶ್ವಗುರು ಬುದ್ಧ ಪ್ರೊಡಕ್ಷನ್ ನ ಪ್ರಧಾನ ನಿರ್ದೇಶಕ ಅರುಣ ಕುಮಾರ್ ನಾಗರಾಜ್ ದಿವಾಣಜಿ, ಯೋಜನೆಯ ವ್ಯವಸ್ಥಾಪಕ ಕನ್ನಾಯಕನಹಳ್ಳಿ ಕುಮಾರ್ ರಾಮೇಗೌಡ, ಸಂಚಾಲಕರಾದ ಎಚ್. ಸತೀಶ್ ಕುಮಾರ್, ಸಿದ್ದಲಿಂಗ ಮೂರ್ತಿ, ಬಿ.ಆರ್. ಬೀರೇಶ್, ಸಂಯೋಜಕರಾದ ಸುರೇಶ್ ಪಿ.ಬಿ., ಶರಣಕುಮಾರ್ ದಿವಾಣಜಿ ಉಪಸ್ಥಿತರಿದ್ದರು.

# ರಾಜಕೀಯ ಪುಢಾರಿಗಳಿಗೆ ಮೇಲ್ಮನೆ ಆಶ್ರಯತಾಣ

## ಸಭಾಪತಿ ಬಸವರಾಜ ಹೊರಟ್ಟಿ ಅಸಮಾಧಾನ । ನಿವೃತ್ತರಾದ ಸದಸ್ಯರಿಗೆ ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗಿ


ಉದಯಕಾಲ ನ್ಯೂಸ್

ಬೆಂಗಳೂರು: ರಾಜಕೀಯ ಪುಢಾರಿಗಳ ಆಶ್ರಯ ತಾಣವಾಗುತ್ತಿರುವುದರಿಂದ ವಿಧಾನಪರಿಷತ್ ಕಲಾಪಗಳು ಸರಿಯಾಗಿ ನಡೆಯುತ್ತಿಲ್ಲ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರಾಜಕೀಯ ಪಕ್ಷಗಳು ರಾಜಕೀಯ ಪುಢಾರಿಗಳನ್ನು ತಂದು ತಂದು ವಿಧಾನ ಪರಿಷತ್‌ಗೆ ಹಾಕುತ್ತಿವೆ. ಇದರಿಂದಾಗಿ ಕಲಾಪಗಳು ಸರಿಯಾಗಿ ನಡೆಯದೇ ನಿರಾಶ್ರಿತರ ಆಶ್ರಯ ಕೇಂದ್ರಗಳಂತಾಗಿವೆ ಎಂದರು.

ವಿಧಾನಸೌಧದಲ್ಲಿ ಪರಿಷತ್ ಸದಸ್ಯರಿಗೆ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎಲ್ಲರಿಗೂ ರಾಜಕೀಯದಲ್ಲಿ ಗಾಡ್ ಫಾದರ್ ಇದ್ದಾರೆ. ನನಗೆ ಯಾರು ಇಲ್ಲ. ರಾಜಕೀಯಕ್ಕೆ ನನ್ನನ್ನು ಯಾರು ತಂದಿಲ್ಲ. ನಾನೇ ಸ್ವಂತ ಶಕ್ತಿಯಿಂದ ಬಂದಿದ್ದೇನೆ ಎಂದು ಹೇಳಿದರು.

ರಾಜಕೀಯಕ್ಕೆ ಬಂದ ಮೇಲೆ ಗಾಡ್ ಫಾದರ್ ಶುರುವಾದರು. ಕಲಾಪದಲ್ಲಿ ಭಾಗಿಯಾದ ಎಲ್ಲಾ ಶಾಸಕರ



ಬಗ್ಗೆ ನನಗೆ ಮಾಹಿತಿ ಗೊತ್ತಿದೆ. ಅವರು ಏನು ಚರ್ಚೆ ಮಾಡಿದ್ದಾರೆ ಎಂಬುದು ನನಗೆ ಗೊತ್ತಿದೆ ಎಂದರು.

ನಾನು ಪರಿಷತ್‌ಗೆ ಬಂದಾಗ ಬೆಳಗ್ಗೆ 9.30ಕ್ಕೆ ಕಲಾಪ ಶುರುವಾಗಿ, ರಾತ್ರಿ 8 ಗಂಟೆಗೆ ಮುಗಿಯುತ್ತಿತ್ತು. ಸದನ ನಡೆಯುತ್ತಿದ್ದ ಸಂದರ್ಭದಲ್ಲಿ ಒಂದು ಸೂಜಿ ಬಿದ್ದರೂ ಅದರ ಶಬ್ದ ಕೇಳಿಸುವಷ್ಟು ನಿಶ್ಯಬ್ದ ಇರುತ್ತಿತ್ತು. ಆದರೀಗ ವಿಧಾನ ಪರಿಷತ್ ಅಂದರೆ ಮುನಿಸಿಪಾಲಿಟಿ ತರಹ ಆಗಿದೆ. ನನಗೆ ಇದರ ಬಗ್ಗೆ ಸಾಕಷ್ಟು ನೋವಾಗಿದೆ. ವಿಧಾನ ಪರಿಷತ್ ಗೌರವ ಕಡಿಮೆ ಆಗುತ್ತಿದೆ ಎಂದರು. ನಿರಾಶ್ರಿತರ ಕೇಂದ್ರದ ತರಹ ಪರಿಷತ್ ಆಗಿದೆ. ಕಲಾಪಗಳು ಸರಿಯಾಗಿ ನಡೆಯುತ್ತಿಲ್ಲ. ಎಲ್ಲದ್ದಕ್ಕೂ ಬಾವಿಗೆ ಬಂದು ಇಳಿಯೋದು, ಧಿಕ್ಕಾರ ಕೂಗೋದು ಜಾಸ್ತಿ ಆಗಿದೆ. ನಾವೆಲ್ಲ ಅಜೆಂಡಾ ಇಟ್ಟುಕೊಂಡು ಓದಿಕೊಂಡು ಬರುತ್ತಿದ್ದೆವು. ಈಗ ಪ್ರಶ್ನೆ ಕೇಳಿ ಎರಡು ನಿಮಿಷಕ್ಕೆ ಹೊರಗೆ ಹೋಗುತ್ತಾರೆ ಎಂದು ಅಸಮಾಧಾನ ಹೊರಹಾಕಿದರು.

ನಮ್ಮ ದೇಶದಲ್ಲಿ ದುಡ್ಡು ಕೊಟ್ಟು ಓಟ್ ಹಾಕಿಸಿಕೊಳ್ಳೋರು, ದುಡ್ಡು ಪಡೆದು ಓಟ್ ಹಾಕೋರು ಎಲ್ಲಿವರೆಗೂ ಇರುತ್ತಾರೋ ಅಲ್ಲಿವರೆಗೂ ಪ್ರಜಾಪ್ರಭುತ್ವ ಸರಿ ಆಗಲ್ಲ. ಇದೆಲ್ಲವನ್ನೂ ಕಾಲವೇ ಸುಧಾರಣೆ ಮಾಡಬೇಕು. ನಾನು 8 ಬಾರಿ ಆಯ್ಕೆಯಾಗಿ ಬಂದಿದ್ದೇನೆ. ಅದರ ಗುಟ್ಟು ಸುಖಕರ ಆಗಿಲ್ಲ. ಆದರೆ, ಈಗಿನವರು ಶಿಕ್ಷಕರ ಮತದಾರ ಕ್ಷೇತ್ರದಿಂದಲೂ ದುಡ್ಡು ತಿಂದು, ದುಡ್ಡು ಕೊಟ್ಟು ಓಟ್ ಹಾಕಿಸಿಕೊಂಡು ಬಂದಿದ್ದಾರೆ. ಶಿಕ್ಷಕರು ಸಹ ದುಡ್ಡು ತೆಗೆದುಕೊಂಡು ಮತ ಹಾಕುತ್ತಿದ್ದಾರೆ. ಶಿಕ್ಷಕರು ಸಹ ಚುನಾವಣೆ ದುಡ್ಡಿನ ಮೇಲೆ ಮಾಡಿದರೆ, ರಾಜಕೀಯ ಎಲ್ಲಿಗೆ ಬರ್ತಿದೆ ಎಂದು ಆಕ್ರೋಶ ಹೊರಹಾಕಿದರು.